# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 612(741)
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 11-12-2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಈ ಉಪನ್ಯಾಸಕರುಗಳಲ್ಲಿ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ಹೊಂದಲು ಅರ್ಹರಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; | ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ: 8606.<br><br>2014ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ಹೊಂದಲು ನಿಗದಿತ ಐದು ವರ್ಷಗಳ ಸೇವಾವಧಿಯನ್ನು ಪೂರ್ಣಗೊಳಿಸಿರುವ ಉಪನ್ಯಾಸಕರ ಸಂಖ್ಯೆ: 7460<br><br>ಈ ಉಪನ್ಯಾಸಕರುಗಳಲ್ಲಿ 2014ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಾಂಶುಪಾಲರ ವೃಂದದ ಬಡ್ತಿ ಕೋಟದಲ್ಲಿ ಖಾಲಿಯಿರುವ ರಿಕ್ತಸ್ಥಾನಗಳ ಲಭ್ಯತೆ, ಉಪನ್ಯಾಸಕರ ಜೇಷ್ಠತೆ ಅನುಸಾರ ಖಾಯಂಪೂರ್ವ ಸೇವಾವಧಿ ಘೋಷಣೆ, ಇಲಾಖಾ ವಿಚಾರಣೆ, ಕ್ರಿಮಿನಲ್ ಮೊಕದ್ದಮೆ, ನ್ಯಾಯಾಲಯ ತನಿಖೆ, ನಿಗದಿತ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಹಾಗೂ ಇನ್ನಿತರೆ ಷರತ್ತುಗಳನ್ನು ಪೂರೈಸಿರುವ ಉಪನ್ಯಾಸಕರುಗಳು ಬಡ್ತಿಗೆ ಅರ್ಹತೆಯನ್ನು ಹೊಂದಿರುತ್ತಾರೆ. |
| ಆ) | ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರುಗಳಿಗೆ ಸರ್ಕಾರವು ಯಾವ ಕಾಲಮಿತಿಯೊಳಗೆ ಪ್ರಾಂಶುಪಾಲರಾಗಿ ಬಡ್ತಿಯನ್ನು ನೀಡಲು ಕ್ರಮವಹಿಸಲಿದೆ? | ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಗೆ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯನ್ನು ನಿರ್ದೇಶನಾಲಯದ ಹಂತದಲ್ಲಿ ಪ್ರಾರಂಭಿಸಲಾಗಿದೆ. |

**ಸಂಖ್ಯೆ:ಇಪಿ 219 ಡಿಜಿಡಬ್ಲ್ಯೂ 2023**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.